**ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂಃ ನ್ಯಾಯಾಲಯ, ಮದ್ದೂರು.**

**ಸಿಸಿ 385/2020**

| | | |
|---|---|---|
| ಸಾಕ್ಷಿದಾರರ ಹೆಸರು | – ಮಂಜೇಗೌಡ | ಚಾ.ಸಾ–9 |
| ತಂದೆಯ ಹೆಸರು | – ಗೋವಿಂದೇಗೌಡ | ಫ್ರಾ.ಸಾ–4 |
| ವಯಸ್ಸು | – 38 ವರ್ಷ | |
| ಉದ್ಯೋಗ | – ಪಿಐ, ಸೈಬರ್ ಅಪರಾಧ ಠಾಣೆ | |
| ವಾಸಸ್ಥಳ | – ಮಂಡ್ಯ | |

ದಿನಾಂಕಃ 03–11–2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:ಅಭಿಯೋಜನೆಯ ಪರಃ ಎಪಿಪಿ ಯವರಿಂದ:**

ನಾನು ಆಗಸ್ಟ್ 2018 ರಿಂದ ಸೆಪ್ಟೆಂಬರ್ 2020 ರವರೆಗೆ ಮದ್ದೂರು ಪೋಲೀಸ್ ಠಾಣೆಯಲ್ಲಿ ಪಿ ಎಸ್ ಐ ಕರ್ತವ್ಯ ನಿರ್ವಹಿಸಿರುತ್ತೇನೆ.

ನಾನು ದಿ 26–08–2019 ಈ ಕೇಸಿನ ಕಡತವನ್ನು ಚಾಸಾ–8 ರವರಿಂದ ಪಡೆದುಕೊಂಡು ಪರಿಶೀಲಿಸಿರುತ್ತೇನೆ. ನಂತರ ಚಾಸಾ–1 ರಿಂದ 4 ರವರ ಗಾಯದ ಪ್ರಮಾಣ ಪತ್ರಗಳನ್ನು ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ದಿ 28–08–2019 ರಂದು ಆರೋಪಿತರ ವಿರುದ್ದ ಆರೋಪ ಸಾಬೀತಾದ ಕಾರಣ ಅವರ ವಿರುದ್ದ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ಚಾಸಾ-1 ರಿಂದ 4 ರವರ ಗಾಯದ ಪ್ರಮಾಣ ಪತ್ರಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ-5 ರಿಂದ ನಿಪಿ-8 ಎಂದು, ಅದರಲ್ಲಿನ ಸಾಕ್ಷಿಯ ಸಹಿಗಳನ್ನು ನಿಪಿ-6 ಎ ರಿಂದ ನಿಪಿ-8 ಎ ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿತರ ಪರ ಶ್ರೀಮತಿ.ಪಿಎಸ್ ಕೆ ವಕೀಲರಿಂದಃ-

ಈ ಕೇಸಿನ ಕಡತವನ್ನು ಸ್ವೀಕರಿಸುವ ಮೊದಲು ತನಿಖೆಯನ್ನು ಮಾಡಿರುತ್ತೇನೆ. ನಾನು ಚಾಸಾ–1 ರಿಂದ 4 ರವರ ಗಾಯದ ಪ್ರಮಾಣ ಪತ್ರಗಳನ್ನು ಪಡೆದಿಲ್ಲ, ಚಾಸಾ–1 ರವರು ಸೃಷ್ಟಿಸಿರುವ ಸುಳ್ಳು ದೂರಿಗೆ ಪೂರಕವಾಗುವಂತೆ ನೀವು ಸುಳ್ಳು ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿದ್ದೀರಿ ಎಂದರೆ ಸರಿಯಲ್ಲ. ಆರೋಪಿತರ ವಿರುದ್ದ ಯಾವುದೇ

ದೋಷರೋಪಣೆ ರುಜುವಾಗದೇ ಇದ್ದರೂ ಸುಳ್ಳು ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿ, ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ನಿಮ್ಮ ಮೇಲಾಧಿಕಾರಿಗಳ ಮಾತುಕೇಳಿಕೊಂಡು ನಿಮ್ಮ ಠಾಣಾ ಅಂಕಿ-ಅಂಶಗಳಿಗೋಸ್ಕರ ಈ ಬಗ್ಗೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ಸುಳ್ಳು ದಾಖಲೆಗಳನ್ನು ಸೃಷ್ಟಿ ಹಾಜರುಪಡಿಸಿದ್ದೀರಿ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸರಿಯಾಗಿದೆಂದು ಒಪ್ಪಿರುತ್ತಾರೆ.

2 ನೇ ಅಪರ ಸಿವಿಲ್ ಮತ್ತು

ಸಾಕ್ಷಿ ಸಹಿಃ ಜೆ.ಎಂ.ಎಫ್.ಸಿ. ನ್ಯಾಯಾಧೀಶರು, ಮದ್ದೂರು.